ರಾಜ್ಯದಲ್ಲಿ ಭಾಗ್ಯಲಕ್ಷ್ಮಿ ಬಾಂಡ್ ಯೋಜನೆ

827 (719) ಶ್ರೀ ಬಂಡೆಪ್ಪ ಕಾಶೆಂಪೂರ್ (ಬೀದರ್ ದಕ್ಷಿಣ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಭಾಗ್ಯಲಕ್ಷ್ಮಿ ಬಾಂಡ್ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಗೆ ನೀಡಬೇಕಾಗಿರುವ ಬಾಕಿ ಬಾಂಡ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರಗಳನ್ನು ನೀಡುವುದು);

ಆ) ಬಾಕಿ ಇರುವ ಬಾಂಡ್‌ಗಳನ್ನು ಯಾವಾಗ ವಿತರಿಸಲಾಗುವುದು;

ಇ) ಈ ಬಾಂಡ್‌ಗಳ ವಿತರಣೆಯ ವಿಳಂಬಕ್ಕೆ ಕಾರಣಗಳೇನು;

ಈ) ಸಿಂಧನೂರು ತಾಲ್ಲೂಕಿನಲ್ಲಿ ಬಾಕಿ ಇರುವ ಬಾಂಡ್‌ಗಳ ಸಂಖ್ಯೆ ಎಷ್ಟು; (ವಿವರಗಳನ್ನು ನೀಡುವುದು)

ಶ್ರೀ ಸಿ.ಸಿ. ಪಾಟೀಲ್ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) : ಅ) ತಾಲ್ಲೂಕುವಾರು ವಿವರಗಳು ಕೆಳಕಂಡಂತಿವೆ.

ಕ್ರ. ಸಂ.	ತಾಲ್ಲೂಕಿನ ಹೆಸರು	ಈವರೆಗೆ ಬಾಂಡ್ ವಿತರಿಸಲು ಬಾಕಿ ಇರುವ ಅರ್ಜಿಗಳ ಸಂಖ್ಯೆ
1	ಬೀದರ್	249
2	ಬಸವಕಲ್ಯಾಣ	971
3	ಬಾಲ್ಕಿ	44
4	ಹುಮನಾಬಾದ್	299
5	ಔರಾದ್	128
	ಒಟ್ಟು	**1691**

ಆ) 2009-10ನೇ ಸಾಲಿನವರೆಗೆ ಉಳಿದಿರುವ 944 ಫಲಾನುಭವಿಗಳಿಗೆ ಬಾಂಡ್‌ಗಳನ್ನು ವಿತರಿಸಲಾಗುತ್ತಿದೆ. ಇತರೆ 747 ಫಲಾನುಭವಿಗಳಿಗೆ ಆಯವ್ಯಯದ ಲಭ್ಯತೆಗನುಸಾರವಾಗಿ ಬಾಂಡ್ ವಿತರಿಸಲು ಕ್ರಮವಹಿಸಲಾಗುವುದು.

ಇ) ಆಯವ್ಯಯದ ಲಭ್ಯತೆಗನುಸಾರವಾಗಿ ಬಾಂಡ್ ವಿತರಿಸಲು ಕ್ರಮವಹಿಸಲಾಗುವುದು.

ಈ) 723 ಅರ್ಜಿಗಳು ಬಾಕಿ ಇರುತ್ತದೆ.

ಕರ್ನಾಟಕ ಗೃಹ ಮಂಡಳಿ ವತಿಯಿಂದ ನಿವೇಶನದ ಮನೆಗಳು

828 (720) ಶ್ರೀ ಬಂಡೆಪ್ಪ ಕಾಶೆಂಪೂರ್ (ಬೀದರ್ ದಕ್ಷಿಣ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ ನಿರ್ಮಿಸಿರುವ ನಿವೇಶನ ಮತ್ತು ಮನೆಗಳ ಸಂಖ್ಯೆ ಎಷ್ಟು; (ಜಿಲ್ಲಾ ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)?

ಆ) ಕಳೆ ದ ಮೂರು ವರ್ಷಗಳಲ್ಲಿ ಕೊಳಚೆ ನಿರ್ಮೂಲನೆ ಮಂಡಳಿ ವತಿಯಿಂದ ನಿರ್ಮಿಸಲಾದ ಮನೆಗಳ ಸಂಖ್ಯೆ ಎಷ್ಟು (ಜಿಲ್ಲಾ ಮತ್ತು ತಾಲ್ಲೂಕುವಾರು ವಿವರಗಳನ್ನು ನೀಡುವುದು)?

ಇ) ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ಗೃಹ ಮಂಡಳಿಗೆ ನಿವೇಶನ ಹಾಗೂ ಮನೆಗಳನ್ನು ನಿರ್ಮಿಸಲು ಭೂ ಸ್ವಾಧೀನ ಪಡಿಸಿಕೊಂಡ ಜಮೀನುಗಳೆಷ್ಟು (ಜಿಲ್ಲಾ ಮತ್ತು ತಾಲ್ಲೂಕುವಾರು ವಿವರಗಳನ್ನು ನೀಡುವುದು)?

ಈ) ಭೂ ಸ್ವಾಧೀನಪಡಿಸಿಕೊಂಡ ಜಮೀನಿನಲ್ಲಿ ನಿವೇಶನ ಮತ್ತು ಮನೆಗಳನ್ನು ನಿರ್ಮಿಸಲಾಗಿದೆಯೇ?

ಉ) ಕರ್ನಾಟಕ ಗೃಹ ಮಂಡಳಿ ಮತ್ತು ಕೊಳಚೆ ನಿರ್ಮೂಲನಾ ಮಂಡಳಿ ವತಿಯಿಂದ ಹಂಚಿಕೆ ಮಾಡಲಾಗಿರುವ ಮನೆಗಳ ಸಂಖ್ಯೆ ಎಷ್ಟು (ಜಿಲ್ಲಾ ಮತ್ತು ತಾಲ್ಲೂಕುವಾರು ವಿವರಗಳನ್ನು ನೀಡುವುದು);

ಊ) ಮೇಲ್ಕಂಡ ಮಂಡಳಿಯವರು ಮನೆಗಳನ್ನು ಹಂಚಲು ಅನುಸರಿಸಿರುವ ಮಾನದಂಡಗಳೇನು (ವಿವರಗಳನ್ನು ನೀಡುವುದು)?

ಶ್ರೀ ವಿ. ಸೋಮಣ್ಣ (ವಸತಿ ಸಚಿವರು) :

ಅ) ಕರ್ನಾಟಕ ಗೃಹ ಮಂಡಳಿ ವತಿಯಿಂದ ಕಳೆದ 3 ವರ್ಷಗಳಲ್ಲಿ ಕೆಳಕಂಡ ಕಾರ್ಯಕ್ರಮದಡಿ ಅಭಿವೃದ್ಧಿ ಪಡಿಸಿರುವ/ಅಭಿವೃದ್ಧಿ ಪಡಿಸುತ್ತಿರುವ